ವಿ.ಹೆಚ್. ಕೃಷ್ಣಾರೆಡ್ಡಿ

ರಾಜ್ಯದ ಸೌಹಾರ್ದ ಸಹಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ತಮ್ಮ ಸಹಕಾರಿಯ ಕಾರ್ಯಚಟುವಟಿಕೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡುವುದರ ಜೊತೆಗೆ ಜನಸಾಮಾನ್ಯರಿಗೆ ಅನುಕೂಲವಾಗುವ ಸಾಮಾಜಿಕ ಕಾರ್ಯಗಳನ್ನು ಹಮ್ಮಿಕೊಳ್ಳುವುದು ಹಾಗೂ ಬೇರೆ ಬೇರೆ ವಿಧವಾದ ಸೌಹಾರ್ದ ಸಹಕಾರಿಗಳನ್ನು ಪ್ರಾರಂಭಿಸಲು ಕಾರ್ಯಯೋಜನೆ ಹಾಕಿಕೊಂಡು ಅನುಷ್ಠಾನಕ್ಕೆ ಕ್ರಮವಿಡಬೇಕು.

ವಾರ್ಷಿಕ ಸಾಮಾನ್ಯ ಸಭೆಗಳು – ಸದಸ್ಯರ ಸಕ್ರೀಯ ಭಾಗವಹಿಸುವಿಕೆಯ ಮೂಲಕ ಸಧೃಡ ಆರ್ಥಿಕ ಸಂಘಟನೆಗಳಾಗಿ ವಿಭಿನ್ನವಾಗಿ ವಿಶೇಷತೆಯನ್ನು ಕಾಯ್ದುಕೊಂಡು ಕಾರ್ಯನಿರ್ವಹಿಸುವತ್ತ ಗಮನ ಹರಿಸಲಿ

ಆತ್ಮೀಯ ಸಹಕಾರಿ ಬಂಧುಗಳಿಗೆಲ್ಲ 72 ನೇ ಸ್ವಾತಂತ್ರ ದಿನಾಚರಣೆಯ ವರಮಹಾಲಕ್ಷ್ಮೀ ಹಾಗೂ ಬಕ್ರೀದ್ ಹಬ್ಬಗಳ ಶುಭಾಶಯಗಳು.

ಬಂಧುಗಳೇ ರಾಜ್ಯದಲ್ಲಿ ಸೌಹಾರ್ದ ಸಹಕಾರಿ ಚಳುವಳಿ ಪ್ರಾರಂಭವಾಗಿ 17 ವರ್ಷಗಳು ಕಳೆದಿವೆ. ಈ ಕ್ಷೇತ್ರ ವೇಗದ ಪ್ರಗತಿಯನ್ನು ಸಾಧಿಸುತ್ತಲಿದ್ದು ರಾಜ್ಯದ ರಾಷ್ಟ್ರದ ಸಹಕಾರಿಗಳ, ಸರಕಾರದ ಹಾಗೂ ಸಾರ್ವಜನಿಕರ ಗಮನವನ್ನು ಸೆಳೆಯುತ್ತಿರುವುದು ತಮಗೆಲ್ಲ ತಿಳಿದ ವಿಷಯ. ರಾಜ್ಯದಲ್ಲಿ ಈ 4340ಕ್ಕೂ ಹೆಚ್ಚು ಸೌಹಾರ್ದ ಸಹಕಾರಿಗಳು ನೊಂದಣೆಯಾಗಿವೆ. 1147ಕ್ಕೂ ಹೆಚ್ಚು ಇ–ಸ್ಟಾಂಪಿಂಗ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು ರಾಜ್ಯದ ಬೊಕ್ಕಸಕ್ಕೆ ಪ್ರತಿದಿನ 1.25 ಕೋಟಿಗೂ ಹೆಚ್ಚು ರಾಜಸ್ವವನ್ನು ನೀಡುತ್ತಿದೆ ಈ ಕ್ಷೇತ್ರ. ರಾಜ್ಯದ ಸೌಹಾರ್ದ ಸಹಕಾರಿ ಕ್ಷೇತ್ರದಲ್ಲಿ 50 ಲಕ್ಷಕ್ಕೂ ಹೆಚ್ಚು ಸದಸ್ಯರು ತೊಡಗಿಸಿಕೊಂಡಿದ್ದಾರೆ. 55,000ಕ್ಕೂ ಹೆಚ್ಚು ಜನರಿಗೆ ಉದ್ಯೋಗವನ್ನು ಕಲ್ಪಿಸಲಾಗಿದೆ. 750 ಕೋಟಿ ರೂಗಳ ಪಾಲು ಬಂಡವಾಳ, 17000 ಕೋಟಿ ರೂಗಳ ಠೇವಣಿ, 1300 ರೂ ಕೋಟಿಗಳ ನಿಧಿಗಳು, 13000 ರೂ ಕೋಟಿಗಳ ಸಾಲ, 19000 ಕೋಟಿ ರೂಗಳ ದುಡಿಯುವ ಬಂಡವಾಳ, 250 ಕೋಟಿ ರೂಗಳ ಲಾಭದ ಹೆಗ್ಗಳಿಕೆ ಈ ಕ್ಷೇತ್ರದ್ದಾಗಿದೆ.

ಈ ಗೌರವಕ್ಕೆ ರಾಜ್ಯದ ಸೌಹಾರ್ದ ಸಹಕಾರಿ ಕ್ಷೇತ್ರದ ಎಲ್ಲಾ ಹಿರಿಯರಿಗೆ ಹಾಗು ಸಹಕರಿಸಿದ ಸರಕಾರದ ಸಹಕಾರ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ಸಂಯುಕ್ತ ಸಹಕಾರಿಯ ಆಡಳಿತ ಮಂಡಳಿಯು ಅಭಿನಂದನೆಗಳನ್ನು ತಿಳಿಸುತ್ತದೆ.

ಸೌಹಾರ್ದ ಸಹಕಾರಿ ಕಾಯ್ದೆಯನ್ವಯ ಪ್ರತಿವರ್ಷ ಜೂನ, ಜುಲೈ, ಆಗಷ್ಟ ಹಾಗು ಸೆಪ್ಟೆಂಬರ ಮಾಹೆಯ 25ರ ವರೆಗೆ ರಾಜ್ಯದ ಎಲ್ಲ ಸೌಹಾರ್ದ ಸಹಕಾರಿಗಳಿಗೆ ವಾರ್ಷಿಕ ಸಾಮಾನ್ಯ ಸಭೆಯನ್ನು ಜರುಗಿಸುವ ಸಂಭ್ರಮ. ಈ ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಗಳು ಸಹಕಾರಿಗಳಲ್ಲಿ ಆಡಳಿತ ಮಂಡಳಿಯವರು ಹಾಗೂ ಸಿಬ್ಬಂದಿಯವರು ಸದಸ್ಯರಿಂದೊಡಗೊಡಿ ಹಬ್ಬದಂತೆ ಆಚರಿಸುವುದರ ಜೊತೆಗೆ ತಮ್ಮ ಆರ್ಥಿಕ ಹಾಗೂ ಸಾಮಾಜಿಕ ಅಬಿವೃದ್ಧಿಗೆ ಸೌಹಾರ್ದ ಸಹಕಾರಿಯನ್ನು ಸಾಧನವನ್ನಾಗಿ ಬಳಸಿಕೊಳ್ಳುವ ಹಾಗೆ ವಾತಾವರಣ ಇರಬೇಕೆಂಬುದು ಸಂಯುಕ್ತ ಸಹಕಾರಿಯ ಅಪೇಕ್ಷೆ. ಮತ್ತು ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಗಳು ಸಹಕಾರಿ ಕ್ಷೇತ್ರದ ಸಾಂಪ್ರದಾಯಿಕ ಸಹಕಾರಿ ಸಂಸ್ಥೆಗಳಿಗಿಂತ ವಿಭಿನ್ನ ಹಾಗು ವಿಶೇಷವಾಗಿರುವುದನ್ನು ಇನ್ನೂ ಹೆಚ್ಚು ವೈವಿಧ್ಯಮಯವಾಗಿಸಬೇಕು. ಈಗಾಗಲೆ ಹೆಚ್ಚಿನ ಸೌಹಾರ್ದ ಸಹಕಾರಿಗಳಲ್ಲಿ ಈ ರೀತಿಯ ವಾತಾವರಣ ಸೃಷ್ಟಿಯಾಗಿರುವುದು ಸಂತೋಷಕರ.

ರಾಜ್ಯದ ಸೌಹಾರ್ದ ಸಹಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ತಮ್ಮ ಸಹಕಾರಿಯ ಕಾರ್ಯಚಟುವಟಿಕೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡುವುದರ ಜೊತೆಗೆ ಜನಸಾಮಾನ್ಯರಿಗೆ ಅನುಕೂಲವಾಗುವ ಸಾಮಾಜಿಕ ಕಾರ್ಯಗಳನ್ನು ಹಮ್ಮಿಕೊಳ್ಳುವುದು ಹಾಗೂ ಬೇರೆ ಬೇರೆ ವಿಧವಾದ ಸೌಹಾರ್ದ ಸಹಕಾರಿಗಳನ್ನು ಪ್ರಾರಂಭಿಸಲು ಕಾರ್ಯಯೋಜನೆ ಹಾಕಿಕೊಂಡು ಅನುಷ್ಠಾನಕ್ಕೆ ಕ್ರಮವಿಡಬೇಕು. ರಾಜ್ಯದ ಸೌಹಾರ್ದ ಸಹಕಾರಿ ಕ್ಷೇತ್ರದ ಅಭಿವೃದ್ಧಿಗೆ ಸಂಯುಕ್ತ ಸಹಕಾರಿಯ ಕಾರ್ಯಚಟುವಟಿಕೆಗಳ ಬಗ್ಗೆ ಸಹಕಾರಿಗಳ ಸಲಹೆ ಹಾಗು ಮಾರ್ಗದರ್ಶನ ಸಹಕಾರ ನಿರಂತರವಾಗಿರಲಿ.